**<u>ಹಿಂಬರಹ ಸಂಖ್ಯೆ: ಡಿಟಿಇ 06 ಡಿಇಕ್ಯೂ(1) 2013, ದಿನಾಂಕ: 05/10/2016</u>** / 1939

ಸರ್ಕಾರದ ಆದೇಶ ಸಂಖ್ಯೆ: ಇಡಿ/197/ಡಿಟಿಇ/2013(ಭಾಗ)ನ್ನು ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಈ ಕೆಳಕಂಡವರಿಗೆ ಕಳುಹಿಸಲಾಗಿದೆ.

**ಆಡಳಿತಾಧಿಕಾರಿ.**

ಇವರಿಗೆ,

ಶ್ರೀ.ಗೋವಿಂದರಾಜು, ಹಿಂದಿನ ಪ್ರಿನ್ಸಿಪಾಲರು, ಸರ್ಕಾರಿ ಪಾಲಿಟೆಕ್ನಿಕ್, ಬೀದರ್ – ಪ್ರಿನ್ಸಿಪಾಲರ ಮುಖಾಂತರ

**<u>ಪ್ರತಿ – ಮಾಹಿತಿ ಹಾಗೂ ಮುಂದಿನ ಕ್ರಮಕ್ಕಾಗಿ</u>**

1. ಮಹಾಲೇಖಪಾಲರು (ಎ&ಇ ಲೆಕ್ಕಪರಿಶೋಧನೆ-1, ಲೆಕ್ಕಪರಿಶೋಧನೆ-2), ಕರ್ನಾಟಕ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯಕಾರ್ಯದರ್ಶಿಯವರು, ಶಿಕ್ಷಣ ಇಲಾಖೆ (ತಾಂತ್ರಿಕ ಶಿಕ್ಷಣ), ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಜಂಟಿನಿರ್ದೇಶಕರು(ಆಡಳಿತ), ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
4. ಶ್ರೀ.ಜಿ.ಶ್ರೀಕಾಂತ್, ಉಪ ನಿರ್ದೇಶಕರು(ತನಿಖೆ), ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು.
5. ಆಡಳಿತಾಧಿಕಾರಿಯವರು, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು.
6. ಪ್ರಿನ್ಸಿಪಾಲರು, ಸರ್ಕಾರಿ ಪಾಲಿಟೆಕ್ನಿಕ್, ಬೀದರ್.
7. ನಿರ್ದೇಶಕರ ಆಪ್ತಶಾಖೆಗೆ ಮಾಹಿತಿಗಾಗಿ.
8. ಇ-ಆಡಳಿತ ವಿಭಾಗ, ಸದರಿ ಆದೇಶವನ್ನು ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸುವ ಸೂಕ್ತ ಕ್ರಮಕ್ಕಾಗಿ.
9. ಇಎಸ್‌ಟಿ1(ಎ) ಇಎಸ್‌ಟಿ(6) ವಿಭಾಗಕ್ಕೆ.

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಶ್ರೀ.ಗೋವಿಂದರಾಜು, ಪ್ರಾಂಶುಪಾಲರು, ಸರ್ಕಾರಿ ಪಾಲಿಟೆಕ್ನಿಕ್, ಕಾಳಗಿ, ಬೀದರ್-ಇವರ ವಿರುದ್ಧ ಇಲಾಖಾ ವಿಚಾರಣೆಯನ್ನು ನಡೆಸಲು ವಿಚಾರಣಾಧಿಕಾರಿ ಹಾಗೂ ಮಂಡನಾಧಿಕಾರಿಯನ್ನು ನೇಮಕ ಮಾಡುವ ಬಗ್ಗೆ.

ಓದಲಾಗಿದೆ:

(1) ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ರವರ ಪತ್ರಸಂಖ್ಯೆ: ಡಿಟಿಇ 06 ಡಿಇಕ್ಯೂ (1) 2013 (ಏಕಕಡತ), ದಿನಾಂಕ: 07.05.2015.

(2) ಸರ್ಕಾರದ ನೋಟೀಸ್ ಸಂಖ್ಯೆ: ಇಡಿ 197 ಡಿಟಿಇ 2013 (ಭಾಗ), ದಿನಾಂಕ: 25.05.2015.

(3) ಶ್ರೀ.ಗೋವಿಂದರಾಜು, ಹಿಂದಿನ ಪ್ರಾಂಶುಪಾಲರು, ಸರ್ಕಾರಿ ಪಾಲಿಟೆಕ್ನಿಕ್, ಕಾಳಗಿ, ಬೀದರ್-ಇವರ ಲಿಖಿತ ಹೇಳಿಕೆ, ದಿನಾಂಕ: 01.10.2015.

(4) ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಇವರ ಪತ್ರಸಂಖ್ಯೆ: ಡಿಟಿಇ 06 ಡಿಇಕ್ಯೂ (1) 2013/41, ದಿನಾಂಕ: 04.04.2016.

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮಸಂಖ್ಯೆ (1)ರ ಪತ್ರದಲ್ಲಿ ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು ರವರು ಶ್ರೀ.ಗೋವಿಂದರಾಜು, ಇವರು ಸರ್ಕಾರಿ ಪಾಲಿಟೆಕ್ನಿಕ್, ಬೀದರ್-ಇಲ್ಲಿ ಪ್ರಾಂಶುಪಾಲರಾಗಿ ಕರ್ತವ್ಯ ನಿರ್ವಹಿಸುತ್ತಿದ್ದ ಅವಧಿಯಲ್ಲಿ ನಡೆಸಿರುವ ಅವ್ಯವಹಾರ, ದುರಾಚಾರ, ದುರ್ನಡತೆಯಿಂದ ಅಧಿಕಾರ ವ್ಯಾಪ್ತಿ ಮೀರಿ ನಡೆದುಕೊಂಡಿರುವ ಬಗ್ಗೆ ಇವರ ಮೇಲಿನ ಆರೋಪದ ಬಗ್ಗೆ ದೋಷಾರೋಪಣಾ ಪಟ್ಟಿ ತಯಾರಿಸಿ, ಶಿಸ್ತುಕ್ರಮ ಜರುಗಿಸಲು ಸರ್ಕಾರಕ್ಕೆ ಕಳುಹಿಸಿರುತ್ತಾರೆ.

ಮೇಲೆ ಓದಲಾದ ಕ್ರಮಸಂಖ್ಯೆ (2)ರ ಪತ್ರದಲ್ಲಿ ಸದರಿ ಪ್ರಾಂಶುಪಾಲರ ವಿರುದ್ಧ ಶಿಸ್ತುಕ್ರಮ ಜರುಗಿಸಲು ಕರ್ನಾಟಕ ನಾಗರೀಕ ಸೇವಾ ನಿಯಮ (ಸಿ.ಸಿ.ಎ), 1957ರ ನಿಯಮಗಳು, ನಿಯಮ 11ರ ಉಪಬಂಧಗಳಗನುಸಾರವಾಗಿ ನಿರ್ದಿಷ್ಟವಾದ ಮತ್ತು ಸ್ಪಷ್ಟವಾದ ದುರ್ನಡತೆಯ ದೋಷಾರೋಪಣಾ ಮತ್ತು ದೋಷಾರೋಪಣೆಯ ವಿವರಗಳನ್ನು ಹಾಗೂ ಅದಕ್ಕೆ ಸಮರ್ಥಿಸುವ ದಸ್ತಾವೇಜುಗಳ ಮತ್ತು ಸಾಕ್ಷಿಗಳ ಪಟ್ಟಿಯನ್ನು ಕಾರಣ ಕೇಳುವ ನೋಟೀಸ್‌ನೊಡನೆ ಜಾರಿ ಮಾಡಲಾಗಿತ್ತು ಹಾಗೂ ಅವರಿಗೆ ಲಿಖಿತ ಹೇಳಿಕೆಯನ್ನು ನೀಡಲು 15 ದಿನಗಳ ಕಾಲಾವಕಾಶವನ್ನು ನೀಡಲಾಗಿತ್ತು.

ಮೇಲೆ ಓದಲಾದ ಕ್ರಮಸಂಖ್ಯೆ (3)ರ ಮನವಿಯಲ್ಲಿ ಶ್ರೀ.ಗೋವಿಂದರಾಜು, ಇವರು ತಮ್ಮ ವಿರುದ್ಧ ಹೊರಿಸಲಾಗಿರುವ ಎಲ್ಲಾ ಆರೋಪಗಳೂ ದುರುದ್ದೇಶದಿಂದ ಕೂಡಿದ್ದು, ಸತ್ಯಕ್ಕೆ ದೂರವಾಗಿರುವುದರಿಂದ ತಮ್ಮನ್ನು ಸದರಿ ಆರೋಪಗಳಿಂದ ಮುಕ್ತಗೊಳಿಸುವಂತೆ ಕೋರಿದ್ದು, ಸದರಿ ಉತ್ತರವನ್ನು ಪರಿಶೀಲಿಸಿ, ಸ್ಪಷ್ಟ ಅಭಿಪ್ರಾಯ ನೀಡುವಂತೆ ತಾಂತ್ರಿಕ ಶಿಕ್ಷಣ ನಿರ್ದೇಶಕರನ್ನು ಕೋರಲಾಗಿ, ತಾಂತ್ರಿಕ ಶಿಕ್ಷಣ ನಿರ್ದೇಶಕರು ಮೇಲೆ ಕ್ರಮಸಂಖ್ಯೆ (4)ರಲ್ಲಿ ಓದಲಾದ ಪತ್ರದಲ್ಲಿ ಶ್ರೀ.ಗೋವಿಂದರಾಜು ಇವರ ವಿರುದ್ಧದ ಆರೋಪಪಟ್ಟಿಯಲ್ಲಿರುವ 10 ಆರೋಪಗಳಿಗೂ ಪೂರಕ ದಾಖಲೆಗಳೊಂದಿಗೆ ಸಮಂಜಸ ಉತ್ತರವನ್ನು ನೀಡಿರುವುದಿಲ್ಲ ಹಾಗೂ ನೀಡಿರುವ ಉತ್ತರವೂ ಸಹ ಸಮರ್ಪಕವಾಗಿರುವುದಿಲ್ಲವೆಂದು ತಿಳಿಸುತ್ತಾ, ಸದರಿಯವರ ವಿರುದ್ಧ ಇಲಾಖಾ ವಿಚಾರಣೆಯನ್ನು ನಡೆಸುವುದು ಸೂಕ್ತವೆಂದು ಅಭಿಪ್ರಾಯ ನೀಡಿರುತ್ತಾರೆ.

ಆದ್ದರಿಂದ ಶ್ರೀ.ಗೋವಿಂದರಾಜು, ಹಿಂದಿನ ಪ್ರಾಂಶುಪಾಲರು, ಸರ್ಕಾರಿ ಪಾಲಿಟೆಕ್ನಿಕ್, ಬೀದರ್-ಇವರ ವಿರುದ್ಧದ ಆರೋಪಗಳ ಸತ್ಯಾಸತ್ಯತೆಗಳನ್ನು ತಿಳಿಯಲು ಪೂರ್ಣ ಪ್ರಮಾಣದ ಇಲಾಖಾ ವಿಚಾರಣೆಯನ್ನು ಜರುಗಿಸಲು ಸರ್ಕಾರವು ನಿರ್ಣಯಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಇಡಿ 197 ಡಿಟಿಇ 2013 (ಭಾಗ),**
**ಬೆಂಗಳೂರು, ದಿನಾಂಕ: 28ನೇ ಸೆಪ್ಟೆಂಬರ್ 2016.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನೆಲೆಯಲ್ಲಿ, ಶ್ರೀ.ಗೋವಿಂದರಾಜು, ಹಿಂದಿನ ಪ್ರಾಂಶುಪಾಲರು, ಸರ್ಕಾರಿ ಪಾಲಿಟೆಕ್ನಿಕ್, ಬೀದರ್-ಇವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ಸಿ.ಸಿ.ಎ), ನಿಯಮಗಳು, 1957ರ ನಿಯಮ 11ರ ಉಪಬಂಧಗಳಗನುಸಾರವಾಗಿ (2) ಮತ್ತು (5)ರಡಿಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಅವರುಗಳ ಮೇಲಿನ ದೋಷಾರೋಪಣೆಗೆ ಸಂಬಂಧಿಸಿದಂತೆ ಇಲಾಖಾ ವಿಚಾರಣೆಯನ್ನು ನಡೆಸಲು ಶ್ರೀ.ಡಿ.ವಿ.ಶೇಟ್., ನಿವೃತ್ತ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರು, 'ಆದರ್ಶ', ಸೈದಾಪುರ, ಧಾರವಾಡ-580 008 (ಮೊಬೈಲ್ ಸಂಖ್ಯೆ: 9448981542)-ಇವರನ್ನು ವಿಚಾರಣಾಧಿಕಾರಿಗಳನ್ನಾಗಿ ಹಾಗೂ ಇದೇ ನಿಯಮದ ನಿಯಮ 11(5)(ಸಿ) ಅಡಿಯಲ್ಲಿ ಶ್ರೀ.ಜಿ.ಶ್ರೀಕಾಂತ್., ಉಪ ನಿರ್ದೇಶಕರು (ತನಿಖೆ), ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಅರಮನೆ ರಸ್ತೆ, ಬೆಂಗಳೂರು (ಮೊಬೈಲ್ ಸಂಖ್ಯೆ: 9448820473)--ಇವರನ್ನು ಶಿಸ್ತು ಪ್ರಾಧಿಕಾರದ ಪರವಾಗಿ ಮಂಡನಾಧಿಕಾರಿಗಳನ್ನಾಗಿ ನೇಮಕ ಮಾಡಲಾಗಿದೆ.

ವಿಚಾರಣಾಧಿಕಾರಿಗಳು ಕರ್ನಾಟಕ ನಾಗರೀಕ ಸೇವಾ (ಸಿ.ಸಿ.ಎ) ನಿಯಮಗಳು, 1957ರ ನಿಯಮ 11ರಡಿಯಲ್ಲಿ ತಿಳಿಸಲಾಗಿರುವ ಕಾರ್ಯವಿಧಾನವನ್ನು ಅನುಸರಿಸಿ ಇಲಾಖಾ ವಿಚಾರಣೆಯನ್ನು 03 ತಿಂಗಳ ಒಳಗಾಗಿ ಪೂರ್ಣಗೊಳಿಸಿ ವರದಿ ನೀಡುವಂತೆ ತಿಳಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

S. Venkatesh

(ಎಸ್.ವೆಂಕಟೇಶ್),
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ತಾಂತ್ರಿಕ ಶಿಕ್ಷಣ).

28/09/2016

**ಗೆ:**

1. ಶ್ರೀ.ಡಿ.ವಿ.ಶೇಟ್., ನಿವೃತ್ತ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರು, 'ಆದರ್ಶ', ಸೈದಾಪುರ, ಧಾರವಾಡ-580 008 (ಮೊಬೈಲ್ ಸಂಖ್ಯೆ: 9448981542)-(ಆಪಾದಿತರಿಗೆ ಜಾರಿ ಮಾಡಲಾದ ಆರೋಪಣಾ ಪಟ್ಟಿ ಹಾಗೂ ದಾಖಲಾತಿಗಳೊಂದಿಗೆ ಕಳುಹಿಸಿದೆ) (R.P.A.D.).
2. ಶ್ರೀ.ಜಿ.ಶ್ರೀಕಾಂತ್., ಉಪ ನಿರ್ದೇಶಕರು (ತನಿಖೆ), ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಅರಮನೆ ರಸ್ತೆ, ಬೆಂಗಳೂರು (ಮೊಬೈಲ್ ಸಂಖ್ಯೆ: 9448820473) (ಆಪಾದಿತರಿಗೆ ಜಾರಿ ಮಾಡಲಾದ ಆರೋಪಣಾ ಪಟ್ಟಿ ಹಾಗೂ ದಾಖಲಾತಿಗಳೊಂದಿಗೆ ಕಳುಹಿಸಿದೆ).

**ಪ್ರತಿ:**

1. ಮಹಾಲೇಖಪಾಲರು (ಎ&ಇ, ಲೆಕ್ಕಪರಿಶೋಧನೆ-1, ಲೆಕ್ಕಪರಿಶೋಧನೆ-2), ಕರ್ನಾಟಕ, ಬೆಂಗಳೂರು.
2. ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
3. ಮುಖ್ಯ ಆಡಳಿತಾಧಿಕಾರಿ, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
4. ಶ್ರೀ.ಗೋವಿಂದರಾಜು, ಹಿಂದಿನ ಪ್ರಾಂಶುಪಾಲರು, ಸರ್ಕಾರಿ ಪಾಲಿಟೆಕ್ನಿಕ್, ಬೀದರ್ (ತಾಂತ್ರಿಕ ಶಿಕ್ಷಣ ನಿರ್ದೇಶಕರ ಮುಖಾಂತರ).
5. ಶಾಖಾ ರಕ್ಷಾ ಕಡತ : ಓಡಿಜಿಸಿ : ಹೆಚ್ಚಿನ ಪ್ರತಿ.